<u>ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>

<u>ಮುಂದುವರೆದ ಮುಖ್ಯ ವಿಚಾರಣೆ ಅರ್ಜಿದಾರರ ಪರವಾಗಿಃ ಶ್ರೀ ಜೆ.ಡಿ. ವಕೀಲರಿಂದಃ</u>

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸುತ್ತಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ಪ್ರ ವ ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿಃ 1 ಅಂತ, ದೂರಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿಃ 2 ಅಂತ, ಸದರಿ ಕೇಸಿನಲ್ಲಿ ನಡೆಸಿದ ಸ್ಥಳ ಪಂಚನಾಮೆ ಮತ್ತು ವಾಹನ ಪರಿಶೀಲನಾ ಪಂಚನಾಮೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿಃ 3 ಅಂತ, ಐ.ಎಂ.ವಿ. ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿಃ 4 ಅಂತ, ಶವ ತನಿಖಾ ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿಃ 5 ಅಂತ, ಶವ ಪರೀಕ್ಷಾ ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿಃ 6 ಅಂತ, ಅಂತಿಮ ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿಃ 7 ಅಂತ ಗುರುತಿಸಲಾಯಿತು. ನಮ್ಮ ಕುಟುಂಬದ ವಂಶವೃಕ್ಷದ ಪ್ರಮಾಣ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿಃ 8 ಅಂತ ಗುರುತಿಸಲಾಯಿತು.

ನನ್ನ ಮಗ ಅಭಿನಂದ ಇವರ ಮರಣ ದಾಖಲೆ ಹಾಜರುಪಡಿಸಿದ್ದು ಅದನ್ನು ನಿಪಿಃ 9 ಅಂತ ಗುರುತಿಸಲಾಯಿತು. ಮದ್ದನಕುಂಟೆ ಗ್ರಾಮದ ಎನ್.ಪಿ. ಯು.ಪಿ. ಶಾಲೆಯ ಮುಖೋಪಾಧ್ಯಾಯರು ನೀಡಿದ ಜನ್ಮ ದಿನಾಂಕದ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿಃ 10 ಅಂತ ಗುರುತಿಸಲಾಯಿತು. ಮದ್ದನಕುಂಟೆ ಗ್ರಾಮದ ಎನ್.ಪಿ. ಯು.ಪಿ.

ಶಾಲೆಯ ಮುಖೋಪಾಧ್ಯಾಯರು ನೀಡಿದ ನನ್ನ ಮೃತ ಮಗ ಕೆ.ಬಿ. ಅಭಿನಂದ ಇವರ ಶಾಲಾ ದಾಖಲಾತಿ ಹಾಜರುಪಡಿಸಿದ್ದು ಅದನ್ನು ನಿಪಿಃ 11 ಅಂತ ಗುರುತಿಸಲಾಯಿತು. ಆದ್ದರಿಂದ ಅರ್ಜಿಯಲ್ಲಿ ಕಾಣಿಸಿರುವಂತೆ ಆದೇಶವಾಗಲು ಪ್ರಾರ್ಥನೆ.

(1 ನೇ ಎದುರುದಾರರ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.

ಓ.ಹೇ.ಕೇ.ಸ. ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ, ಚಳ್ಳಕೆರೆ.